- ಕಚ್ಚಾ ಸಾಮಗ್ರಿಗಳು ಮತ್ತು
- ವಿದ್ಯುಚ್ಛಕ್ತಿ ಕಡಿತ ಇತ್ಯಾದಿ.

ಇ) ರಾಜ್ಯ ಸರ್ಕಾರವು ರೋಗಗ್ರಸ್ಥ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

1. ಅಂತರ ರಾಜ್ಯ ಹಣಕಾಸು ಸಂಸ್ಥೆಗಳ ಸಮಿತಿ (ಇಂಟರ್ ಇನ್‌ಸ್ಟಿಟ್ಯೂಷನಲ್ ಕಮಿಟಿ) ಯನ್ನು ರಚಿಸಲಾಗಿದ್ದು ಈ ಸಮಿತಿಯು ರೋಗಗ್ರಸ್ಥ ಸಣ್ಣ ಪ್ರಮಾಣದ ಘಟಕಗಳ ತೊಂದರೆಗಳನ್ನು ಪರಿಶೀಲಿಸುತ್ತದೆ.

2. ರಾಜ್ಯ ಮಟ್ಟದ ಪುನಃಶ್ಚೇತನ ಸಮಿತಿಯನ್ನು ರಚಿಸಲಾಗಿದ್ದು ಈ ಸಮಿತಿಯು ರೋಗಗ್ರಸ್ಥ ಕೈಗಾರಿಕೆಗಳಿಗೆ ಬೀಜಧನ ಸಾಲವನ್ನು ಮಂಜೂರು ಮಾಡುತ್ತದೆ.

3. ಜಿಲ್ಲೆಯಲ್ಲಿ ರೋಗಗ್ರಸ್ಥ ಕೈಗಾರಿಕೆಗಳ ತೊಂದರೆಯನ್ನು ಪರಿಶೀಲಿಸಲು ಜಿಲ್ಲಾವಾರು ರೋಗಗ್ರಸ್ಥ ಪುನಃಶ್ಚೇತನ ಸಮಿತಿಯನ್ನು ರಚಿಸಲಾಗಿದ್ದು ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ನೀಡಬಹುದಾದ ಸವಲತ್ತು ಮತ್ತು ರಿಯಾಯಿತಿಗಳನ್ನು ಒದಗಿಸುವುದು.

ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಯ ಪ್ರದೇಶಗಳಿಗೆ ನೀರಾವರಿ ಸೌಲಭ್ಯ

1096 - ಶ್ರೀ ಟಿ.ಬಿ.ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನೇತ್ರಾವತಿ ನದಿಯ ನೀರನ್ನು ವರ್ಗಾಂತರಿಸಿದರೆ ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಯ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸಬಹುದೆಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಯೋಜನಾ ವರದಿಯು ತಯಾರಾಗಿದೆಯೇ? ಮತ್ತು ಯೋಜನೆಯು ತಾಂತ್ರಿಕ ದೃಷ್ಟಿಯಿಂದ ಸಾಧ್ಯವಾಗುತ್ತದೆಯೇ?*

ಇ) *ಯೋಜನೆಯು ಸಾಧ್ಯವಾದ ಪಕ್ಷದಲ್ಲಿ ಯೋಜನೆಯನ್ನು ಕೈಗೊಳ್ಳಲು ಸರ್ಕಾರವು ಆಶ್ವಾಸನೆ ನೀಡುವುದೇ?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಆ) ಮತ್ತು ಇ)

ಈ ಪ್ರಸ್ತಾವೆಯ ಸಾಧ್ಯತೆ ಬಗ್ಗೆ ಅನ್ವೇಷಣೆ ಮಾಡಲಾಗುತ್ತಿದೆ.

ಭದ್ರಾ ಮೇಲ್ದಂಡೆ ಯೋಜನೆ

1097 - ಶ್ರೀ ಟಿ.ಬಿ.ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿತ್ರದುರ್ಗ ಮತ್ತು ತುಮಕೂರು ಜಿಲ್ಲಾ : ಪ್ರದೇಶಗಳಿಗೆ ನೀರೊದಗಿಸುವ ಸಲುವಾಗಿ ಭದ್ರಾ ಮೇಲ್ದಂಡೆ ಯೋಜನೆಯ ಮಂಜೂರಾತಿಯು ಸುಮಾರು ವರ್ಷಗಳಿಂದ ನೆನಗುದಿಯಲ್ಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಯೋಜನೆಯ ಹಂತ, ಯೋಜನೆಯನ್ನು ಕೈಗೆತ್ತಿಕೊಳ್ಳಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಆ) ಈ ಯೋಜನೆಯು ಇನ್ನೂ ಅನ್ವೇಷಣೆಯಲ್ಲಿದೆ.

ಸರ್ಕಾರಿ ನೌಕರರ ನಿವೃತ್ತಿ ವಯಸ್ಸನ್ನು ಇಳಿಸುವ ಬಗ್ಗೆ

1095 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?